## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಮಂಜಮ್ಮ ಅಧ್ಯಕ್ಷರು, ಶ್ರೀಮತಿ ವಿಶಾಲಾಕ್ಷಮ್ಮ, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಎಂ.ಸಿ. ಲಕ್ಕೇರಪ್ಪ ಕುಂದೂರು ಗ್ರಾಮ ಪಂಚಾಯತಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ), 48(4) & 48(5) ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ದಾ:ಆ(2):ಗ್ರಾ.ಪಂ/ಸಿಆರ್/58/2018-19 ದಿನಾಂಕ:23.11.2018.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/14/2019-20, ದಿನಾಂಕ:12.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಅದರಂತೆ, ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ದಾವಣಗೆರೆ ಜಿಲ್ಲೆ ಇವರು ಕುಂದೂರು ಗ್ರಾಮ ಪಂಚಾಯತಿಯಲ್ಲಿ ಕರವಸೂಲಿಗಾರರ ಹುದ್ದೆಗೆ ನೇಮಕಾತಿ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:17.07.2017ರ ಒಳಗಾಗಿ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಪತ್ರಿಕಾ ಪ್ರಕಟಣೆ ಹೊರಡಿಸಲಾಗಿರುತ್ತದೆ. ಸದರಿ ಹುದ್ದೆಗೆ ಒಟ್ಟು 16 ಅರ್ಜಿಗಳು ಸಲ್ಲಿಕೆಯಾಗಿದ್ದು, ಸದರಿ ಅರ್ಜಿಗಳಲ್ಲಿ ಶ್ರೀ ಗುರುಪ್ರಸಾದ್.ಎಂ.ಆರ್ ಬಿನ್ ರಾಜಪ್ಪ ಎಂ.ಸಿ ಇವರು ಎಂ.ಕಾಂ. ಪದವಿ ಮತ್ತು ಕಂಪ್ಯೂಟರ್ ಟ್ಯಾಲಿ ವಿದ್ಯಾರ್ಹತೆ ಹೊಂದಿರುವುದರಿಂದ, ಸದರಿಯವರನ್ನು ಆಯ್ಕೆ ಮಾಡಲು ದಿನಾಂಕ:20.07.2017ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿರುವುದರ ವಿರುದ್ಧ ಶ್ರೀ ನಿತಿನ್. ಎನ್.ಜಿ. ಬಿನ್ ಹನುಮಂತಪ್ಪ ಹಾಗೂ ಶ್ರೀಮತಿ ಪುಷ್ಪಾ. ಆರ್. ಕೋಂ ಪ್ರಸನ್ನಕುಮಾರ್, ಗ್ರಾಮ ಪಂಚಾಯತಿ ಕುಂದೂರು ಇವರು ಜಿಲ್ಲಾಧಿಕಾರಿಗಳಿಗೆ ಆಕ್ಷೇಪಣೆ ಸಲ್ಲಿಸಿದ್ದರ ಮೇರೆಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊನ್ನಾಳಿರವರು ದಿನಾಂಕ:15.12.2017 ಮತ್ತು ದಿನಾಂಕ:19.12.2017ರಂದು ಸಲ್ಲಿಸಿರುವ ವರದಿಯಲ್ಲಿ ದಿನಾಂಕ:27.10.2017ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಕರವಸೂಲಿಗಾರರ ಹುದ್ದೆಯ

ನೇಮಕಾತಿಗಾಗಿ ಬಂದಿರುವ ಒಟ್ಟು 16 ಅರ್ಜಿಗಳಲ್ಲಿ ಪಿ.ಯು.ಸಿ.ಯಲ್ಲಿ ಗರಿಷ್ಠ ಅಂಕ 82% ಪಡೆದ ಅಮೃತ. ಎ. ಬಿನ್ ಆಂಜನೇಯ ಎಂ.ಹೆಚ್. ಇವರನ್ನು ಸದರಿ ಹುದ್ದೆಗೆ ನಿಯಮಾನುಸಾರ ಆಯ್ಕೆ ಮಾಡಬೇಕಾಗಿದ್ದು, 69% ಅಂಕ ಪಡೆದ ಶ್ರೀ ಗುರುಪ್ರಸಾದ್. ಎಂ.ಆರ್. ಬಿನ್ ರಾಜಪ್ಪ ಎಂ. ಇವರನ್ನು ಆಯ್ಕೆ ಮಾಡಿರುವುದು ಕಾನೂನುಬಾಹಿರವಾಗಿರುವುದಾಗಿ, ಅಭ್ಯರ್ಥಿಯ ಆಯ್ಕೆ ಪ್ರಕ್ರಿಯೆಯನ್ನು ರದ್ದುಪಡಿಸಿ, ಸದರಿ ಹುದ್ದೆಗೆ ದಿನಾಂಕ:10.09.2014ರ ಸರ್ಕಾರದ ಆದೇಶ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 112 ಮತ್ತು 113ರನ್ವಯ ಪರಿಗಣಿಸಿ ಪುನರ್ ಪ್ರಸ್ತಾವನೆ ಸಲ್ಲಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ವರದಿಯಲ್ಲಿ ತಿಳಿಸಿರುತ್ತಾರೆ.

ಆದಾಗ್ಯೂ ದಿನಾಂಕ:21.02.2018ರ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಶ್ರೀ ಗುರುಪ್ರಸಾದ್. ಎಂ.ಆರ್. ಬಿನ್ ರಾಜಪ್ಪ ಎಂ.ಸಿ ಇವರನ್ನು ದಿನಗೂಲಿ ಮೇಲೆ ಮಾಸಿಕ ರೂ.6,000/-ರಂತೆ ಎನ್.ಎಂ.ಆರ್. ಮುಖಾಂತರ ಹಣ ಕೊಡಲು ತೀರ್ಮಾನಿಸಲಾಗಿದೆ.

ಶ್ರೀಮತಿ ಪುಷ್ಪಾ. ಆರ್. ಕೋಂ ಪ್ರಸನ್ನಕುಮಾರ್, ಗ್ರಾಮ ಪಂಚಾಯತಿ, ಕುಂದೂರು ಇವರು ದಿನಾಂಕ:11.07.2018ರಂದು ಈ ಕುರಿತು ಸರ್ಕಾರಕ್ಕೆ ದೂರನ್ನು ಸಲ್ಲಿಸಿದ್ದು, ಸರ್ಕಾರದಿಂದ ತನಿಖಾ ವರದಿ ಸಲ್ಲಿಸುವಂತೆ ಆದೇಶಿಸಿದ ಮೇರೆಗೆ ಪಂಚಾಯತಿ ಅಭಿವೃದ್ಧಿ ಪ್ರಾಧಿಕಾರಿರವರು ದಿನಾಂಕ:17.09.2018ರಂದು ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಕರವಸೂಲಿಗಾರರ ಹುದ್ದೆಗೆ ಅರ್ಜಿ ಸಲ್ಲಿಸಿದ ಒಟ್ಟು 16 ಅಭ್ಯರ್ಥಿಗಳಲ್ಲಿ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚು ಶೇಕಡವಾರು ಅಂಕಗಳನ್ನು ಪಡೆದ ಅಭ್ಯರ್ಥಿಯ ಆಯ್ಕೆಗೆ ಅನುಮೋದಿಸುವಂತೆ, ಇಲ್ಲವಾದಲ್ಲಿ ಮುಂದಿನ ಆಗುಹೋಗುಗಳಿಗೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳೇ ಜವಾಬ್ದಾರರೆಂದು ತಿಳಿಸಿದರೂ ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲು ಒಪ್ಪದೇ ಹೊಸದಾಗಿ ಪ್ರಕ್ರಿಯೆ ನಡೆಸಲು ತೀರ್ಮಾನಿಸಿರುವುದಾಗಿ ತಿಳಿಸಿರುತ್ತಾರೆ.

ಕು॥ ಎ. ಅಮೃತ ಬಿನ್ ಆಂಜನೇಯ .ಎಂ .ಹೆಚ್. ಕುಂದೂರುರವರು ಅವರು ಅತಿ ಹೆಚ್ಚು ಅಂಕಗಳನ್ನು ಪಡೆದಿದ್ದು, ಸರ್ಕಾರದ ಆದೇಶಗಳನ್ವಯ ಅರ್ಹತೆ ಹೊಂದಿರುವುದರಿಂದ ಸದರಿ ಹುದ್ದೆಗೆ ಆಯ್ಕೆ ಮಾಡಿ ಆದೇಶ ನೀಡಬೇಕೆಂದು ಕೋರಿರುತ್ತಾರೆ. ಅಲ್ಲದೆ, ಸದರಿ ಹುದ್ದೆಯ ನೇಮಕಾತಿಗೆ ಗ್ರಾಮ ಪಂಚಾಯತಿಯು ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡದಿರುವುದರಿಂದ, ಆಯ್ಕೆಯಾಗದ ಅಭ್ಯರ್ಥಿಯು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದು, ಸದರಿ ಪ್ರಕರಣದಲ್ಲಿ ಅರ್ಹತೆಯನ್ನು ಪರಿಗಣಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಮಾನ್ಯ ಉಚ್ಚ ನ್ಯಾಯಾಲಯವು ಆದೇಶ ಮಾಡಿದ್ದು, ಆದೇಶ ಪಾಲನೆ ಮಾಡದಿದ್ದುದರಿಂದ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಾಗಿದ್ದು, ನಂತರ ಅರ್ಹತೆಯನ್ನು ಪರಿಗಣಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸುತ್ತಾ, ಕುಂದೂರು ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಸದಸ್ಯರುಗಳು ನಿಯಮಾನುಸಾರ ಶಾಸನಬದ್ಧ ಕರ್ತವ್ಯ ನಿರ್ವಹಿಸುವಲ್ಲಿ ವಿಫಲರಾಗಿರುವುದರಿಂದ ಅವರುಗಳ ವಿರುದ್ಧ ಕರ್ನಾಟಕ ಗ್ರಾಮ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರು ದಿನಾಂಕ:26.07.2019 ಹಾಗೂ 08.11.2019ರ ವಿಚಾರಣೆಗೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಹಾಜರಾಗಿ ಈ ಕೆಳಕಂಡಂತೆ ಲಿಖಿತ ಹೇಳಿಕೆ ನೀಡಿರುತ್ತಾರೆ.

ಕುಂದೂರು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ಮಂಜಮ್ಮ, ಉಪಾಧ್ಯಕ್ಷರಾದ ಶ್ರೀಮತಿ ವಿಶಾಲಾಕ್ಷಮ್ಮ ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯುಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಲಕ್ಕೇರಪ್ಪ ಎಂ.ಸಿ. ರವರುಗಳು ಹಾಜರಾಗಿ ಜಂಟಿಯಾಗಿ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ. ಕಂದಾಯ ವಸೂಲಾತಿಯ ಹಣವನ್ನು ಸಾರ್ವಜನಿಕರು ತಾವೇ ಸ್ವತ: ಗ್ರಾಮ ಪಂಚಾಯತಿಗೆ ಬಂದು ಹಣ ಜಮಾ ಮಾಡುತ್ತಿರುವುದಾಗಿ, ಗ್ರಾಮ ಪಂಚಾಯತಿ ಒಂದೇ ಇರುವುದರಿಂದ, ಅಕ್ಕಪಕ್ಕದ ಗ್ರಾಮಗಳಿಗೆ ಹೋಗಿ ಕರವಸೂಲಿ ಮಾಡುವ ಪ್ರಮೇಯವೇ ಇರುವುದಿಲ್ಲವಾದ ಕಾರಣ ಸದರಿ ಗ್ರಾಮ ಪಂಚಾಯತಿಗೆ ಕರವಸೂಲಿಗಾರ ಹುದ್ದೆಯ ಅವಶ್ಯಕತೆ ಇರುವುದಿಲ್ಲವೆಂದು ಎಲ್ಲರೂ ತೀರ್ಮಾನಿಸಿರುವುದಾಗಿ ತಿಳಿಸಿರುತ್ತಾರೆ.

ಕುಂದೂರು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ಮಂಜಮ್ಮ, ಉಪಾಧ್ಯಕ್ಷರಾದ ಶ್ರೀಮತಿ ವಿಶಾಲಾಕ್ಷಮ್ಮ ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯುಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಲಕ್ಕೇರಪ್ಪ ಎಂ.ಸಿ ರವರು ನೀಡಿರುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿದಾಗ ಅವರುಗಳ ಮೇಲಿರುವ ದೂರಿಗೂ ಅವರು ನೀಡಿರುವ ಹೇಳಿಕೆಗಳು ತದ್ವಿರುದ್ಧವಾಗಿರುತ್ತದೆ. ಸದರಿಯವರ ಕರ್ತವ್ಯ ಹಾಗೂ ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾಯಿಸದೇ ಮೇಲಾಧಿಕಾರಿಗಳ ಆದೇಶವನ್ನು ಪಾಲಿಸದೇ ಇರುವುದು ದೃಢಪಟ್ಟಿರುತ್ತದೆ. ಗ್ರಾಮ ಪಂಚಾಯತಿಯಲ್ಲಿ ಕರವಸೂಲಿಗಾರರ ಹುದ್ದೆಗೆ ನೇಮಕಾತಿ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 112 ಮತ್ತು 113ರನ್ವಯ ಕ್ರಮವಹಿಸಿರುವುದಿಲ್ಲ. ಉಚ್ಚ ನ್ಯಾಯಾಲಯದ ಆದೇಶವನ್ನು ಪರಿಗಣಿಸದೆ ನ್ಯಾಯಾಲಯ ನಿಂದನೆಗೂ ಸಹಾ ಕಾರಣರಾಗಿರುತ್ತಾರೆ. ಆದ ಕಾರಣ ಕುಂದೂರು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ಮಂಜಮ್ಮ, ಉಪಾಧ್ಯಕ್ಷರಾದ ಶ್ರೀಮತಿ ವಿಶಾಲಾಕ್ಷಮ್ಮ ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯುಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಲಕ್ಕೇರಪ್ಪ ಎಂ.ಸಿ. ರವರುಗಳ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ಮತ್ತು 48(5)ರನ್ವಯ ಕ್ರಮ ಜರುಗಿಸಬಹುದಾಗಿರುತ್ತದೆಂದು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಈ ಪ್ರಕರಣದ ವಿಚಾರಣೆ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಕುಂದೂರು ಗ್ರಾಮ ಪಂಚಾಯಿತಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಅಧ್ಯಕ್ಷರಾದ ಶ್ರೀಮತಿ ಮಂಜಮ್ಮ, ಉಪಾಧ್ಯಕ್ಷರಾದ ಶ್ರೀಮತಿ ವಿಶಾಲಾಕ್ಷಮ್ಮ ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯುಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಲಕ್ಕೇರಪ್ಪ ಎಂ.ಸಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರುಗಳ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ), 48(4) ಮತ್ತು 48(5) ರನ್ವಯ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯತ್ವದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 29 ಗ್ರಾಪಂಅ 2020 ಬೆಂಗಳೂರು, ದಿನಾಂಕ:27.01.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹೊನ್ನಾಳಿ ತಾಲ್ಲೂಕು, ಕುಂದೂರು ಗ್ರಾಮ ಪಂಚಾಯಿತಿಯಲ್ಲಿ ಕರವಸುಲಿಗಾರರ ಹುದ್ದೆಯ ನೇಮಕಾತಿಗೆ ಗ್ರಾಮ ಪಂಚಾಯತಿಯು ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡದಿರುವುದರಿಂದ, ಆಯ್ಕೆಯಾಗದ ಅಭ್ಯರ್ಥಿಯು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದು, ಸದರಿ ಪ್ರಕರಣದಲ್ಲಿ ಅರ್ಹತೆಯನ್ನು ಪರಿಗಣಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಮಾನ್ಯ ಉಚ್ಚ ನ್ಯಾಯಾಲಯವು ಆದೇಶ ಮಾಡಿದ್ದು, ಆದೇಶ ಪಾಲನೆ ಮಾಡದಿದ್ದುದರಿಂದ ನ್ಯಾಯಾಂಗ ನಿಂದನೆ ಪ್ರಕರಣ

ದಾಖಲಾಗಿದ್ದು, ನಂತರ ಅರ್ಹತೆಯನ್ನು ಪರಿಗಣಿಸಿ, ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿರುವುದು ಸಾಬೀತಾಗಿರುವುದರಿಂದ ಅಧ್ಯಕ್ಷರಾದ ಶ್ರೀಮತಿ ಮಂಜಮ್ಮ, ಉಪಾಧ್ಯಕ್ಷರಾದ ಶ್ರೀಮತಿ ವಿಶಾಲಾಕ್ಷಮ್ಮ ಇವರುಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) & 48(5) ರನ್ವಯ ಕ್ರಮವಾಗಿ ಅಧ್ಯಕ್ಷ ಸ್ಥಾನ, ಉಪಾಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವದಿಂದ ಮತ್ತು ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯುಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಲಕ್ಕೇರಪ್ಪ ಎಂ.ಸಿ. ಕುಂದೂರು ಗ್ರಾಮ ಪಂಚಾಯಿತಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರುಗಳನ್ನು ಸದರಿ ಅಧಿನಿಯಮದ ಪ್ರಕರಣ 43(ಎ) ರನ್ವಯ ಸದರಿ ಗ್ರಾಮ ಪಂಚಾಯಿತಿಯ ಸದಸ್ಯತ್ವದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/1/2020
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹಚ್. ರಸ್ತೆ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ದಾವಣಗೆರೆ ಜಿಲ್ಲೆ.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಜಿಲ್ಲೆ.
4) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊನ್ನಾಳಿ, ದಾವಣಗೆರೆ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕುಂದೂರು ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
6) ಸಂಬಂಧಿಸಿದವರಿಗೆ( **ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೋನ್ನಾಳಿ ಇವರ ಮುಖಾಂತರ**).
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
8) ಗಣಕ ಕೋಶ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.